5293

ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2013

ಸದಸ್ಯರ ಹೆಸರು : ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 17-03-2022

ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	ಪ್ರಸುತ ರಾಜ್ಯ ಸರ್ಕಾರಿ ನೌಕರರಿಗೆ ಎಷ್ಟನೇ ವೇತನ ಆಯೋಗವನ್ನು ನೀಡಲಾಗಿದೆ; ಮತ್ತು ಯಾವಾಗ ನೀಡಲಾಗಿದೆ (ವಿವರ ನೀಡುವುದು)	ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳ ಪರಿಷ್ಕರಣೆ ಕುರಿತಂತೆ ರಾಜ್ಯ ಸರ್ಕಾರಕ್ಕೆ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ರಚಿಸಲಾಗಿದ್ದ 6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳ ಪ್ರಕಾರ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳನ್ನು ದಿನಾಂಕ: 01-07-2017ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲಾಗಿರುತ್ತದೆ. ರಾಜ್ಯ ಸರ್ಕಾರವು ಸಾಂಪ್ರದಾಯಿಕವಾಗಿ ಕೇಂದ್ರ ವೇತನ ಆಯೋಗಗಳ ಶಿಫಾರಸ್ಸು ಹಾಗೂ ಕೇಂದ್ರ ವೇತನ ಪರಿಷ್ಕರಣೆಯ ಅವಧಿಯನ್ನು ಅನುಸರಿಸದೇ ತನ್ನದೇ ಆದ ವೇತನ ಆಯೋಗ/ ವೇತನ ಸಮಿತಿಗಳಂತಹ ತಜ್ಞ ಸಮಿತಿಗಳ ಶಿಫಾರಸ್ಸಿನ ಮೇರೆಗೆ ತನ್ನದೇ ಆದ ವಿಶಿಷ್ಟ ವೇತನ ರಚನೆಯನ್ನು ಅಳವಡಿಸಿಕೊಂಡಿದ್ದು, ಅದನ್ನು ಕಾಲದಿಂದ ಕಾಲಕ್ಕೆ ಅಂದರೆ ಸಾಮಾನ್ಯವಾಗಿ 6 ವರ್ಷಗಳು ಅಥವಾ ಹೆಚ್ಚು ಅವಧಿಯಲ್ಲಿ ಪರಿಷ್ಕರಿಸಿಕೊಂಡು ಬಂದಿರುತ್ತದೆ.
(ಆ)	ಎಷ್ಟು ವರ್ಷಗಳಿಗೊಮ್ಮೆ ವೇತನ ಆಯೋಗವನ್ನು ರಚಿಸಲಾಗುವುದು, ವಿವರ ನೀಡುವುದು	
(ಇ)	ರಾಜ್ಯ ಮತ್ತು ಕೇಂದ್ರ ಸರ್ಕಾರಿ ನೌಕರರ ನಡುವೆ ವೇತನ ತಾರತಮ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಎಷ್ಟು ಪ್ರಮಾಣದ ತಾರತಮ್ಯ ಇದೆ; (ವಿವರ ನೀಡುವುದು)	
(ಈ)	ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳನ್ನು ಪರಿಷ್ಕರಿಸಲು 7ನೇ ವೇತನ ಆಯೋಗವನ್ನು ಯಾವಾಗ ರಚಿಸಲಾಗುವುದು (ವಿವರ ನೀಡುವುದು)	

		ಆದುದರಿಂದ, ಕೇಂದ್ರ ಸರ್ಕಾರದ ನಿಯಮಗಳು ಮತ್ತು ಕೇಂದ್ರ ವೇತನ ಆಯೋಗದ ಶಿಫಾರಸ್ಸುಗಳು ರಾಜ್ಯ ಸರ್ಕಾರಿ ನೌಕರರಿಗೆ ಅನ್ವಯಿಸುವುದಿಲ್ಲ ಮತ್ತು ಕೇಂದ್ರ ಸರ್ಕಾರದ ಹುದ್ದೆಯ ಸ್ವರೂಪ ಹಾಗೂ ಅವುಗಳಿಗೆ ನಿಗದಿಪಡಿಸಲಾದ ವೇತನ ಶ್ರೇಣಿಗಳನ್ನು ರಾಜ್ಯ ಸರ್ಕಾರದ ಹುದ್ದೆಗಳಿಗೆ ಹೋಲಿಸಲು ಬರುವುದಿಲ್ಲ. ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳ ಪರಿಷ್ಕರಣೆಯ ವಿಷಯವು ಸರ್ಕಾರದ ನೀತಿ ನಿರ್ಣಯಕ್ಕೆ ಸಂಬಂಧಿಸಿದ ವಿಷಯವಾಗಿದ್ದು, ಸಂದರ್ಭಾನುಸಾರ ರಾಜ್ಯದ ಆರ್ಥಿಕ ಸ್ಥಿತಿಗತಿಗಳನ್ನು ಗಮನದಲ್ಲಿರಿಸಿ ಕ್ರಮ ಕೈಗೊಳ್ಳಲಾಗುವುದು.

ಸಂ: ಆಇ 17 ಎಸ್‌ಆರ್‌ಪಿ 2022

(ಬಸವರಾಜ ಬೊಮ್ಮಾಯಿ)

ಮುಖ್ಯಮಂತ್ರಿ